ದಿನಾಂಕ 09-09-2021 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿ ಪರ ಶ್ರೀ ಎಂ.ಎಸ್.ಹೆಚ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿಃ 15-04-2014 ರಂದು ಮಾಹಿತಿ ಹಕ್ಕು ಅಡಿಯಲ್ಲಿ ಪಂಚಾಯತ್ ಅಭಿವೃದ್ಧಿ ಅದಿಕಾರಿಗಳು, ಬೆಳಗಲ್ಲಪೇಟೆ ನೀಡಿರುವ ಹಿಂಬರಹ ಹಾಜರು ಮಾಡಿದ್ದು ಅದನ್ನು ನಿ.ಪಿ-1 ಎಂದು, 6-ಕರ ಆಕರಣೆ ಯಾದಿಗಳ ದೃಢೀಕೃತ ನಕಲುಗಳನ್ನು ಹಾಜರು ಮಾಡಿದ್ದು ಅವುಗಳನ್ನು ನಿ.ಪಿ-1 ರಿಂದ ನಿ.ಪಿ-7 ಎಂದು, ದಿಃ21-10-1929 ರ ದೃಢೀಕೃತ ಖರೀದಿ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ-8 ಎಂದು, ಒಂದು ಛಾಯಾ ಚಿತ್ರವನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ-9 ಎಂದು ಗುರುತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವಕಾಶ ಕೋರುತ್ತಾರೆ, ಆದ್ದರಿಂದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.)**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)**

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್

ಸಾಕ್ಷಿದಾರರ ಸಹಿ